# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 26.05.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರು ಇಂದು ವಾರ್ಡ್ ನಂ.39 ಚೊಕ್ಕಸಂದ್ರದ ರುಕ್ಮಿಣಿನಗರದಲ್ಲಿ ತಪಾಸಣೆ ಕೈಗೊಂಡು ಟಿ. ದಾಸರಹಳ್ಳಿಯ 100 ಅಡಿ ರಸ್ತೆಯಿಂದ ದಾಸರಹಳ್ಳಿ ಕೆರೆಯವರೆಗಿನ ಬೃಹತ್ ನೀರುಗಾಲುವೆಯಿಂದ ಹೂಳೆತ್ತುವ ಕಾಮಗಾರಿಯನ್ನು ಪರಿಶೀಲಿಸಿದರು.

ಈ ರಾಜಕಾಲುವೆಗೆ ಎರಡೂ ಕಡೆ ತಡೆಗೋಡೆ ಇಲ್ಲದೇ ಇರುವುದರಿಂದ ಮಳೆಗಾಲದಲ್ಲಿ ನೀರು ಹರಿದು ಸುತ್ತಮುತ್ತಲಿನ ಪ್ರದೇಶದಲ್ಲಿ ಪ್ರವಾಹ ಉಂಟಾಗುತ್ತಿರುವುದರಿಂದ ರಾಜಕಾಲುವೆಗೆ ಎರಡೂ ಕಡೆ ಕಾಂಕ್ರೀಟ್ ತಡೆಗೋಡೆ ಅಂದರೆ 'ಯು' ಟೈಪ್ ನೀರುಗಾಲುವೆಯನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಈಗಾಗಲೇ ರೂ.333.00 ಲಕ್ಷ ರೂ.ಗಳ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. 2011-12ನೇ ಸಾಲಿನ ಆಯವ್ಯಯದಲ್ಲಿ ಸೇರಿಸಿಕೊಂಡು, ಆದಷ್ಟು ಬೇಗನೆ ನೀರುಗಾಲುವೆ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗುವುದೆಂದು ತಿಳಿಸಿದರು.

ರೂ.3.00 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ದಾಸರಹಳ್ಳಿ ಕೆರೆ ಅಭಿವೃದ್ಧಿಪಡಿಸಲಾಗುತ್ತಿದ್ದು, ಕೆರೆ ಸುತ್ತಲು ತಂತಿ ಬೇಲಿ ನಿರ್ಮಿಸುವ ಕಾರ್ಯ ಮುಗಿದಿದ್ದು, ಇನ್ನು ಸಿವಿಲ್ ಕಾಮಗಾರಿ ನಿರ್ವಹಿಸಬೇಕಾಗಿದೆ. ನಿಗದಿತ ಸಮಯದ ಪ್ರಕಾರ ಈ ಕಾಮಗಾರಿ ಡಿಸೆಂಬರ್ 2010ಕ್ಕೆ ಪೂರ್ಣಗೊಳ್ಳಬೇಕಾಗಿತ್ತು. ಕಾಮಗಾರಿ ನಿರ್ವಹಿಸಲು ವಿಳಂಬವಾಗಿರುವುದಕ್ಕೆ ಗುತ್ತಿಗೆದಾರನ ಕೋರಿಕೆ ಮೇರೆಗೆ ಮಾರ್ಚ್ 2011ರ ವರೆಗೆ ವಿಸ್ತರಿಸಲಾಗಿದೆ. ಆದರೆ, ಇದುವರೆಗೆ ಕಾಮಗಾರಿ ಪೂರ್ಣಗೊಳ್ಳದೇ ಇರುವುದರಿಂದ ಪೂಜ್ಯ ಮಹಾಪೌರರು ಮತ್ತು ದಾಸರಹಳ್ಳಿಯ ಶಾಸಕರಾದ ಶ್ರೀ ಎಸ್.ಮುನಿರಾಜು ರವರು ಗುತ್ತಿಗೆದಾರನನ್ನು ತರಾಟೆಗೆ ತೆಗೆದುಕೊಂಡು, ಎರಡು ತಿಂಗಳ ಒಳಗಾಗಿ ಅಭಿವೃದ್ಧಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಇಲ್ಲದಿದ್ದಲ್ಲಿ ಪಾಲಿಕೆಯಿಂದ ಸಂದಾಯವಾಗಬೇಕಾಗಿದ್ದ ಹಣವನ್ನು ಪಡೆಯುವುದಿಲ್ಲವೆಂಬ ಷರತ್ತಿಗೆ ಒಳಪಟ್ಟು, ಲಿಖಿತ ರೂಪದಲ್ಲಿ ಬರೆದುಕೊಡಲು ಗುತ್ತಿಗೆದಾರರಿಗೆ ಸ್ಥಳೀಯ ಶಾಸಕರು ಕಟ್ಟುನಿಟ್ಟಿನ ಆದೇಶ ನೀಡಿದರು.

ತದನಂತರ ರುಕ್ಮಿಣಿನಗರದಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯ ಕಾರ್ಯವನ್ನು ಪರಿಶೀಲಿಸಿದರು. ಸಾರ್ವಜನಿಕರು ಮಹಾಪೌರರಿಗೆ ದೂರು ನೀಡಿ, ಪ್ರತಿದಿನ ಕಸ ವಿಲೇವಾರಿಯಾಗುವುದಿಲ್ಲ. ಇದರಿಂದ ನಾಗರಿಕರಿಗೆ ತೊಂದರೆಯಾಗುತ್ತಿದೆ ಎಂದು ತಿಳಿಸಿದರು. ಸಹಾಯಕ ಅಭಿಯಂತರರಿಗೆ ಸೂಚನೆ ನೀಡಿ, ಕಸ ವಿಲೇವಾರಿ ಮಾಡುವುದರಲ್ಲಿ ನಿರ್ಲಕ್ಷ್ಯ ತೋರಬಾರದು. ಕಂಡುಬಂದಲ್ಲಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ನೀರಿನ ಕೊರತೆ ಇದ್ದಕಡೆ ಟ್ಯಾಂಕರ್ ಮೂಲಕ ನೀರು ಒದಗಿಸಲು ಜಲಮಂಡಳಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಉಪ ಮಹಾಪೌರರಾದ ಶ್ರೀ ಎಸ್. ಹರೀಶ್ ಮತ್ತು ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ಹಾಗೂ ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀ ಎಂ.ಮುನಿಸ್ವಾಮಿ ರವರು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**